# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 167**
2. **ಮಾನ್ಯ ಸದಸ್ಯರ ಹೆಸರು :ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು)**
3. **ಉತ್ತರಿಸಬೇಕಾದ ದಿನಾಂಕ :14.02.2023**
4. **ಉತ್ತರಿಸುವ ಸಚಿವರು :ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಎಷ್ಟು ಕಾರ್ಖಾನೆಗಳ ಮೇಲೆ ಅಳತೆ ಮತ್ತು ಮಾಪನ ಇಲಾಖೆಯಿಂದ ದಾಳಿ ನಡೆಸಲಾಗಿದೆ; | ರಾಜ್ಯದ ಸಕ್ಕರೆ ಕಾರ್ಖಾನೆಗಳು ತೂಕದಲ್ಲಿ ವ್ಯತ್ಯಾಸ ಮಾಡುತ್ತಿರುವ ಬಗ್ಗೆ ರೈತ ಸಂಘಟನೆಗಳಿಂದ ಹಲವು ದೂರುಗಳು ಬಂದ ಹಿನ್ನಲೆಯಲ್ಲಿ ಹಾಗೂ ಈ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ಒತ್ತಾಯಿಸಿದ್ದರಿಂದ ತೂಕ ಮತ್ತು ಅಳತೆ ಹಾಗೂ ಸಾರಿಗೆ ಇಲಾಖೆಯ ಸಹಯೋಗದೊಂದಿಗೆ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ರಾಜ್ಯದ 21 ಸಕ್ಕರೆ ಕಾರ್ಖಾನೆಗಳ ಮೇಲೆ ದಿನಾಂಕ:14.12.2022ರಂದು ದಾಳಿ ನಡೆಸಿ, ಪರಿಶೀಲಿಸಿರುತ್ತಾರೆ. |
| (ಆ) | ರಾಜ್ಯದ ಎಷ್ಟು ಸಕ್ಕರೆ ಕಾರ್ಖಾನೆಗಳು ತೂಕದಲ್ಲಿ ವ್ಯತ್ಯಾಸ ಮಾಡುತ್ತಿರುವುದು ಕಂಡುಬಂದಿದೆ; ಅದರ ಪ್ರಮಾಣವೆಷ್ಟು;(ವಿವರ ನೀಡುವುದು) | ದಿನಾಂಕ:14.12.2022ರಂದು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ನೇತೃತ್ವದಲ್ಲಿ ದಾಳಿ ನಡೆಸಿದ ಸಮಯದಲ್ಲಿ ದಾಳಿ ನಡೆದ 21 ಸಕ್ಕರೆ ಕಾರ್ಖಾನೆಗಳಲ್ಲಿ ತೂಕದಲ್ಲಿ ಯಾವುದೇ ವ್ಯತ್ಯಾಸ ಕಂಡು ಬಂದಿರುವುದಿಲ್ಲ. |
| (ಇ) | ತೂಕದ ವ್ಯತ್ಯಾಸ ಮಾಡಿರುವ ಎಷ್ಟು ಕಾರ್ಖಾನೆಗಳ ಮೇಲೆ ಸರ್ಕಾರ ಕ್ರಮ ಜರುಗಿಸಿದೆ (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

ಸಂಖ್ಯೆ: ಸಿಐ 25ಎಸ್‌ಜಿಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು